ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಆರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 9ನೇ ಮಾರ್ಚ್, 2020

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

2. ವರದಿಗಳನ್ನೊಪ್ಪಿಸುವುದು

1) **ಶ್ರೀಮತಿ ಕೆ. ಪೂರ್ಣಿಮ** (ಅಧ್ಯಕ್ಷರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ) ಅವರು 2019–20ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ 36ನೇ ವರದಿಯನ್ನೊಪ್ಪಿಸುವುದು.

2) **ಶ್ರೀ ಬಸನಗೌಡ ಆರ್. ಪಾಟೀಲ್ ಯತ್ನಾಳ್** (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ) ಅವರು 2018–19ನೇ ಸಾಲಿನ ಕರ್ನಾಟಕ ವಿಧಾನಸಭೆಯ ಸರ್ಕಾರಿ ಭರವಸೆಗಳ ಸಮಿತಿಯ 6 ಮತ್ತು 7ನೇ ವರದಿಗಳನ್ನೊಪ್ಪಿಸುವುದು.

3. ಭಾರತ ಸಂವಿಧಾನದ ಕುರಿತು ವಿಶೇಷ ಚರ್ಚೆ (ನಾಲ್ಕನೇ ದಿನ)

4. ವಿತ್ತೀಯ ಕಾರ್ಯಕಲಾಪಗಳು

2020–21ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್. ಹಾಲಪ್ಪ ಹರತಾಳ್, ಕೆ.ಜಿ. ಬೋಪಯ್ಯ, ಆರಗ ಜ್ಞಾನೇಂದ್ರ, ದಿನಕರ್ ಕೇಶವ್ ಶೆಟ್ಟಿ ಹಾಗೂ ಇತರರು** – ಕರ್ನಾಟಕ ಭೂ ಕಂದಾಯ ಅಧಿನಿಯಮ 192ಎ ಅನ್ನು ಗ್ರಾಮೀಣ ಪ್ರದೇಶಗಳಿಗೂ ಅನ್ವಯಿಸಿರುವುದರಿಂದ ಬಗರ್ ಹುಕುಂ ಜಾಗ ಮಂಜೂರಾತಿಗೆ ಅಡಚಣೆಯಾಗುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ನಿಸರ್ಗ ನಾರಾಯಣ ಸ್ವಾಮಿ ಎಲ್.ಎನ್., ನಾಗನಗೌಡ ಕಂದಕೂರ ಹಾಗೂ ಕೆ.ಎಸ್. ಲಿಂಗೇಶ್ ಇವರುಗಳು** – ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಉಂಟಾಗಿರುವ ಶುದ್ಧ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀಯುತರುಗಳಾದ ಹೆಚ್.ಕೆ. ಪಾಟೀಲ್, ಅರಗ ಜ್ಞಾನೇಂದ್ರ, ನೆಹರು ಚ. ಓಲೇಕಾರ್, ಕೆ. ರಘುಪತಿ ಭಟ್, ಲಾಲಾಜಿ ಆರ್. ಮೆಂಡನ್, ಎ.ಟಿ. ರಾಮಸ್ವಾಮಿ ಹಾಗೂ ಇತರರು** – 2011ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್‌ಗಳ ನೇಮಕಾತಿಯಲ್ಲಿ ಆದ ವಿಳಂಬ, ಕರ್ನಾಟಕ ಆಡಳಿತ ಮಂಡಳಿಯ ಆದೇಶ, ಸಚಿವ ಸಂಪುಟ ಸಭೆಯ ನಿರ್ಣಯ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶಕ್ಕೆ ಅನುಗುಣವಾಗಿ ಅಡ್ವೋಕೇಟ್ ಜನರಲ್ ಅವರು ನೀಡಿರುವ ಅಭಿಪ್ರಾಯಗಳ ದಾಖಲೆಗಳ ಅನುಸಾರ ಸದರಿ ಪ್ರಕರಣದಲ್ಲಿ ಸಂವಿಧಾನದ ಅನುಚ್ಛೇದ 323(2)ರ ಉಲ್ಲಂಘನೆಯಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

2) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ರಾಜ್ಯದಲ್ಲಿ ಹೊಸದಾಗಿ ಪ್ರಾಥಮಿಕ ಪಶು ಚಿಕಿತ್ಸಾಲಯಗಳ ಆರಂಭ ಹಾಗೂ ಪ್ರಸ್ತುತ ಇರುವಂತಹ ಪ್ರಾಥಮಿಕ ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

3) **ಡಾ॥ ಭರತ್ ಶೆಟ್ಟಿ ವೈ ಅವರು** – ಮಳೆ ಹಾನಿ ಕಾಮಗಾರಿಯಡಿ ಬಿಡುಗಡೆಯಾಗುವ ಅನುದಾನದ ಬಳಕೆಗೆ ವಿಧಿಸಿರುವ ಷರತ್ತು ಮತ್ತು ನಿಬಂಧನೆಗಳನ್ನು ಸಡಿಲಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

4) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ಮಹಾತ್ಮಾ ಗಾಂಧೀ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ನಿರ್ವಹಿಸಿದ ಕಾಮಗಾರಿಗಳಿಗೆ ಹಣ ಪಾವತಿ ಮಾಡಲು ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

5) **ಶ್ರೀ ಎಸ್. ಕುಮಾರ್ ಬಂಗಾರಪ್ಪ ಅವರು** – ಸೊರಬ ತಾಲ್ಲೂಕಿನಲ್ಲಿನ ಕೆರೆಗಳಿಗೆ ನೀರು ತುಂಬಿಸುವ ಎಡದಂಡೆ ಹಾಗೂ ಬಲದಂಡೆ ಯೋಜನೆಗಳ ಅನುಷ್ಠಾನದ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

6) **ಶ್ರೀ ಡಿ. ವೇದವ್ಯಾಸ ಕಾಮತ್ ಅವರು** – ಸ್ಮಾರ್ಟ್‌ಸಿಟಿ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

7) **ಡಾ. ಹೆಚ್.ಡಿ. ರಂಗನಾಥ್ ಅವರು** – ಕುಣಿಗಲ್ ತಾಲ್ಲೂಕಿನ ಮಾರ್ಕೋನಹಳ್ಳಿ ಪಂಚಾಯಿತಿಯಲ್ಲಿ ನಡೆದಿರುವ ಅಕ್ರಮಗಳ ಕುರಿತು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

8) **ಶ್ರೀ ವೆಂಕಟರಾವ್ ನಾಡಗೌಡ ಅವರು** – ಸಿಂಧನೂರು ನಗರ ಸಭೆ ವ್ಯಾಪ್ತಿಯಲ್ಲಿ ಒಳಚರಂಡಿ ಯೋಜನೆ ಕಾಮಗಾರಿಗಳು ಸ್ಥಗಿತಗೊಂಡಿರುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

9) **ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ ಅವರು** – ಬೆಳಗಾವಿ ಜಿಲ್ಲೆಯಲ್ಲಿ ಪ್ರಾರಂಭಿಸಲಾಗಿರುವ ಕಡಲೆ ಖರೀದಿ ಕೇಂದ್ರಗಳಲ್ಲಿ ರೈತರು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

... 4/ ..

10) **ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ ಅವರು** – ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಹಾಗೂ ಚಿತ್ರಕಲಾ ಮಹಾವಿದ್ಯಾಲಯಗಳ ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರಿಗೆ ವೇತನವನ್ನು ಪಾವತಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ (ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ) ಗಮನ ಸೆಳೆಯುವುದು.

11) **ಶ್ರೀ ಸುನಿಲ್ ಬಿಳಿಯಾ ನಾಯ್ಕ ಅವರು** – ಉತ್ತರ ಕನ್ನಡ ಜಿಲ್ಲೆಯಲ್ಲಿ ಜನವಸತಿ ಪ್ರದೇಶವನ್ನು ಗ್ರಾಮಠಾಣ ಪ್ರದೇಶವೆಂದು ಗುರುತಿಸಿರುವುದರಿಂದ ಸಾರ್ವಜನಿಕರು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ರಾಜ್ಯದಲ್ಲಿ ಖಾಸಗಿ ಭೂ ಹಿಡುವಳಿದಾರರ ಪೋಡಿ ದುರಸ್ತು ಕಾರ್ಯ ಕೈಗೊಳ್ಳುವಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

13) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ಅನ್ನಭಾಗ್ಯ ಯೋಜನೆಯಡಿ ಬಿಪಿಎಲ್ ಪಡಿತರ ಚೀಟಿದಾರರಿಗೆ ನೀಡುತ್ತಿರುವ ಆಹಾರ ಧಾನ್ಯಗಳ ವಿತರಣೆಯಲ್ಲಿ ಸೋರಿಕೆಯಾಗುತ್ತಿರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm